\

# TALUK LEGAL SERVICES COMMITTEE, MALAVALLI.

No.TLSC/MALAVALLI(RTI)/2024

Office of the
Taluku legal services committee,
Malavalli, Dated: 20-06-2024.

## NOTIFICATION

In exercise of the powers conferred under Sec.4(1)(b) of the Right to Information Act, 2005 (Central Act No.22 of 2005), the detailed information relating to the Taluk Legal Services Committee, Malavalli is published as here in under for the information of the General Public.

| | | |
|---|---|---|
| I. | Particulars of organization functions and duties | Organization: **Taluk Legal Services Committee.**<br>**<u>Functions and Duties</u>**<br>1) To Create Legal awareness in the people.<br>2) To Provide free legal aid and advice for eligible persons.<br>3) To provide justice to the affected persons quickly and in low cost by settling cases (litigation) through Janata Nyayalayas (Lok Adalats)<br>4) Services of Legal Aid Lawyers to provide legal aid and advice.<br>5) Para Legal Volunteers to assist legal aid lawyers and to help the litigants in filing up forms fro legal aid etc. |
| II. | Powers and duties of its officers and employees | Details are as at Annexure I |
| III. | Procedure followed in the decision making process, including channels of supervision and | Caseworker (Admin clerk typist) will open a file on receipt of proposal and process the proposal in the existing file. He will scrutinize the same and place it |

| | | |
|---|---|---|
| | accountability. | before the Member Secretary will review the proposal in light of existing provisions/Rules and will decide the course of action. If necessary, he will submit the file before Hon'ble Chairman, TLSC for necessary orders. |
| IV. | Norms set by the Authority for discharge of its functions | Depending on urgency proposal will be finalized on priority. |
| V. | Rules, regulations, instructions, manuals and records, held by it or under its control. | Details are as at Annexre-II |
| VI. | A Statement of the categories of documents that are held by the Authority or under its control. | Files and relevant Registers are maintained. |
| VII. | Particulars of any arrangement that exists for consultation with, or representation by, the members of the public in relation to the formulation of its policy or implementation thereof Member Secretary will provide information | Member Secretary will provide information. |
| VIII. | A Statement of the boards councils, committees and other bodies consisting of two or more persons constituted as its part of for the purpose of its advice and as to whether meetings of those boards, councils, committees and other bodies are open to | Meetings of the Committee are not open to the public and the minutes of such meetings are not accessible to public. |

review



| | | |
|---|---|---|
| | the public, or the minutes of such meetings are accessible for public. | |
| IX. | A directory of its officer | Directory of officer is maintained. |
| X. | Monthly remuneration received by each of its officers and employees, including the system of compensation as provided in its regulations. | As per the scale of pay of their post mentioned in Schedule-I of Karnataka State Legal Services Authorities Rules. |
| XI. | Budget allocated to each of its agency, indicating the particulars of all plans, proposed expenditures and reports on disbursements made. | Allotment of the budget to the Committee is under plan and non-plans scheme of the Karnataka State Legal Services Authority. |
| XII. | Manner of execution of subsidy programmes, including the amounts allocated and the details of beneficiaries of such programmes | As per the scheme of the Act and Rules framed there under. |
| XIII. | Details in respect of the information, available to or held by it reduced in an electronic form | Available in the website www.kslsa.kar.nic.in |
| XIV. | Particulars of facilities available to citizens for obtaining information, including the working hours of a library or reading room, if maintained for public use. | Public may approach the office during working hours, on all working days. |
| XV. | The designation and other particulars of the Public Information Officer. | Member Secretary,<br>TLSC Malavalli, Court complex<br>Malavalli, Mandya.<br>Phone. no: 9008774272.<br>E-mail : tlscmalavalli.2020@gmail.com. |

| | | |
|---|---|---|
| XVI. | (a) Appellate Authority under sec. 19(1) of Right to Information Act. | Memeber Secretary, Karnataka State Legal Services Authority. Tel No.080-22111714 |
| XVII. | (b) Member Secretary of Taluka Legal Services Committee U/s 5(2) of Right to Information Act. | Member Secretary, Taluka Legal Services Committee, Malavalli- as State Assistant Information Officer. 9945981921. |
| XVIII | Such other information as may be prescribed | NIL |

Individual files cannot be uploaded since they are concerned with the personal matters of the litigants.

Member Secretary and
Public Information Officer,
Malavalli.

## ANNEXURE-I

**The powers and duties of the Officers and employees of the Taluk Legal Services Committee**

| | |
|---|---|
| Member Secretary | Heads of the organization Acts, in their capacity as head of the Departments upon the advice/directions of the Hon'ble Chairman, Taluk Legal Service Committee. |
| (Assistant/ Junior Assistant /Admin Assistant) | To attend to the job of case working s per the duties cast on them, i.e., Lok Adalath, Providing Legal-Aid, Conducting Legal Literacy Programmes, Victim Compensation and Monitoring Committees, etc.,<br><br>In charge of receipt of tappals/files by the Hon'ble Chairman and Member Secretary and typing work entrusted by the Member Secretary. |
| Dalayaths | To keep the Office neat and tidy.<br>To deliver the files/tappals to other sections. |

## ANNEXURE-II

**The rules, regulations, instructions, mannuals and records, held by it of under its control or used by its emoloyees for its functions:-**

**(a) Acts:-**

1. The Legal Services Authorities Act 1987 (As mannded by the Legal Services Authorities (Amendment) Act, 2002)
2. The Karnataka State Legal Services Authorities Rules 1996.
3. The Karnataka State Legal Services Authorities Regulation 1997.

**(b) Rules:-**

1. The Karnataka Civil Services Rules.
2. The Karnataka Financial Code, 1958
3. The Karnataka Civil Services (Madical Attendence) Rules 1963.
4. The Karnataka Civil Services (Performance Reports) Rules, 1994.

**(c ) Instructions, Manuals and others**

1. The Criminal Procedure Code.
2. The Civil Procedure Code.

# ತಾಲ್ಲೂಕು ಕಾನೂನು ಸೇವೆಗಳ ಸಮಿತಿ,

# ನ್ಯಾಯಾಲಯಗಳ ಸಂಕೀರ್ಣ,

# ಮಳವಳ್ಳಿ-571430

ಮಾಹಿತಿ ಹಕ್ಕು ಅಧಿನಿಯಮ, 2005 ರ ಪ್ರಕರಣ 4 ರಡಿಯಲ್ಲಿ ಮಾಹಿತಿ ವಿವರ

*********

| | |
|---|---|
| ಕಛೇರಿ ಹೆಸರು ಮತ್ತು ವಿಳಾಸ | ತಾಲ್ಲೂಕು ಕಾನೂನು ಸೇವೆಗಳ ಸಮಿತಿ,<br>ನ್ಯಾಯಾಲಯದ ಸಂಕೀರ್ಣ,<br>ಮಳವಳ್ಳಿ-571430. |
| ಕಛೇರಿ ಇ-ಮೇಲ್ ವಿವರ | tlscmalavalli.2020@gmail.com |

**ತಾಲ್ಲೂಕು ಕಾನೂನು ಸೇವೆಗಳ ಸಮಿತಿಯ ಧ್ಯೇಯೋದ್ದೇಶಗಳು:**

- ಸಾರ್ವಜನಿಕರಲ್ಲಿ ಕಾನೂನಿನ ಬಗ್ಗೆ ಅರಿವನ್ನು ಉಂಟು ಮಾಡುವುದು. (ಅರಿವು-ನೆರವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರೊಂದಿಗೆ).
- ಉಚಿತ ಕಾನೂನು ನೆರವು ಮತ್ತು ಸಲಹೆಯನ್ನು ನೀಡುವುದು.
- ಜನತಾ ನ್ಯಾಯಾಲಯ (ಲೋಕ್ ಅದಾಲತ್)ಗಳ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಜನರಿಗೆ ತ್ವರಿತವಾಗಿ ಮತ್ತು ಕಡಿಮೆ ಖರ್ಚಿನಲ್ಲಿ ನ್ಯಾಯ ದೊರಕಿಸಿಕೊಡುವುದು .

**ತಾಲ್ಲೂಕು ಕಾನೂನು ಸೇವೆಗಳ ಸಮಿತಿಯಿಂದ ಉಚಿತವಾಗಿ ದೊರಕುವ ಸೇವೆಗಳು:**

- ಉಚಿತ ಕಾನೂನು ಸೇವೆಗಳು (ನಿಶ್ಚಿತ ವರ್ಗಗಳವರಿಗೆ )ಹಾಗೂ ವಾರ್ಷಿಕ ಆದಾಯ ರೂ **3** ಲಕ್ಷಗಳಿಗಿಂತ ಕಡಿಮೆ ಹೊಂದಿರುವವರಿಗೆ.
- ಉಚಿತ ಕಾನೂನು ಸಲಹೆ.

- ರಾಜೀ ಸಂಧಾನ.
- ಜನತಾ ನ್ಯಾಯಾಲಯ ಮೂಲಕ ನ್ಯಾಯಾಲಯಗಳಲ್ಲಿರುವ ಪ್ರಕರಣಗಳ ಇತ್ಯರ್ಥ.
- ಮಧ್ಯಸ್ಥಿ ಕೆ ಕೇಂದ್ರಗಳ ಮೂಲಕ ಸಂಧಾನ ವ್ಯವಸ್ಥೆ.
- ವ್ಯಾಜ್ಯಪೂರ್ವ ಸಮಸ್ಯೆಗಳ ಪರಿಹಾರ.
- ಕಾನೂನು ಸಾಕ್ಷರತೆ/ ಕಾನೂನು ಅರಿವು-ನೆರವು.
- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರು.
- ಮಹಿಳೆಯರು ಮತ್ತು ಮಕ್ಕಳು.
- ಕಾರ್ಖಾನೆಯ ಕಾರ್ಮಿಕರು.
- ಗುಂಪು ಘರ್ಷಣೆ, ಗಲಭೆ, ಪ್ರವಾಹ, ಕ್ಷಾಮ, ಭೂಕಂಫ ಕೈಗಾರಿಕಾ ವಿನಾಶಾ ಮುಂತಾದವುಗಳಿಗೆ ತುತ್ತಾದವರು.
- ಮತೀಯ ಗಲಭೆಯ ಕಾರದಿಂದ ದೌರ್ಜನ್ಯಕ್ಕೆ ಹೊಂದಿದವರು.
- ರಕ್ಷಣಾ ಗೃಹ, ಮನೋರೋಗಿಗಳ ಆಸ್ಪತ್ರೆ ಮುಂತಾದವುಗಳಲ್ಲಿ ಅಭಿರಕ್ಷೆಯಲ್ಲಿರುವವರು.
- ದೈಹಿಕ ವ್ಯಾಪಾರ ಅಥವಾ ಜೀತಕ್ಕೊಳಗಾದವರು.
- ವಾರ್ಷಿಕ ಆದಾಯ ಮೂರು ಲಕ್ಷರೂಪಾಯಿಗಳಿಗಿಂತ ಕಡಿಮೆ ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ಸೇವೆಯನ್ನು ಪಡೆಯಲು ಅರ್ಹರಿರುತ್ತಾರೆ.
- ಸರ್ವೋಚ್ಚ ನ್ಯಾಯಾಲಯದಲ್ಲಿ ಕಾನೂನು ಸೇವೆಯನ್ನು ಪಡೆಯಲು ವಾರ್ಷಿಕ ಆದಾಯ ಐದು ಲಕ್ಷಗಳಿಗಿಂತ ಕಡಿಮೆ ಇರುವ ಎಲ್ಲಾ ವರ್ಗದ ಜನರು ಉಚಿತ ಕಾನೂನು ಸೇವೆಯನ್ನು ಪಡೆಯಲು ಅರ್ಹರಿರುತ್ತಾರೆ.
- ಉಚಿತ ಕಾನೂನು ನೆರವು ಎಂದರೆ ಪ್ರಕರಣಮೊಂದಕ್ಕೆ ಸಂಬಂಧಿಸಿದಂತೆ ವಕೀಲರ ಫೀಸು ಮತ್ತು ನ್ಯಾಯಾಲಯ ಶುಲ್ಕ ಹಾಗೂ ಇತರೆ ವೆಚ್ಚಗಳನ್ನು ಸಂಪೂರ್ಣವಾಗಿ ಜಿಲ್ಲಾ ಪ್ರಾಧಿಕಾರದಿಂದಲೇ ಭರಿಸಲಾಗುವುದು.

- ವಿಚಾರಣಾಧೀನ ಖೈದಿಗಳಿಗೆ ಉಚಿತ ಕಾನೂನು ಸೇವೆಗಳನ್ನು ನೀಡಲಾಗುವುದು.

**ಉಚಿತ ಕಾನೂನು ಸಲಹಾ ಕೇಂದ್ರಗಳು:**

ಸಾರ್ವಜನಿಕರಿಗಾಗಿ ತಾಲ್ಲೂಕು ಕಾನೂನು ಸೇವಾ ಸಮಿತಿ ಈ ಕೆಳಕಂಡ ಸ್ಥಳಗಳಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಸೇವೆಯನ್ನು ಪ್ರಾರಂಬಿಸಲಾಗಿದ್ದು ಈ ಕೇಂದ್ರಗಳ ಮೂಲಕ ಸಾರ್ವಜನಿಕರು ದಿನನಿತ್ಯದ ಕಾನೂನು ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದಾಗಿದೆ.

**ಉಚಿತ ಕಾನೂನು ಸಲಹಾ ಕೇಂದ್ರಗಳ ವಿವರ:-**

- ಸಲಹಾ ಕೇಂದ್ರ (ಸಿಡಿಪಿಓ ಕಛೇರಿ), ಮಳವಳ್ಳಿ.
- ಸಲಹಾ ಕೇಂದ್ರ ತಾಲ್ಲೂಕು ಕಛೇರಿ, ಮಳವಳ್ಳಿ.
- ಸಲಹಾ ಕೇಂದ್ರ ಆರಕ್ಷಕ ಕಛೇರಿ, ಮಳವಳ್ಳಿ.

**ಜನತಾ ನ್ಯಾಯಾಲಯ (ಲೋಕ್ ಅದಾಲತ್ )ಗಳು:**

- ಪ್ರಕರಣವೊಂದರ ಉಭಯ ಪಕ್ಷಗಳವರಲ್ಲಿ ರಾಜೀ ಸಂದಾನ ಏರ್ಪಡಿಸುವ ಮೂಲಕ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನ್ಯಾಯಾಲಯವೇ "ಜನತಾ ನ್ಯಾಯಾಲಯ: (ಲೋಕ್ ಅದಾಲತ್).

**ಜನತಾ ನ್ಯಾಯಾಲಯಗಳಲ್ಲಿ ಎಂತಹ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗುತ್ತದೆ?**

ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ

- ಮೋಟಾರು ವಾಹನ ಅಪಘಾತ ಸಂಬಂಧ ಪರಿಹಾರ ಪ್ರಕರಣಗಳು:
- ಭೂ ಸ್ವಾಧೀನ ಸಂಬಂಧ ಪ್ರಕರಣಗಳು, ನಗರಾಭಿವೃದ್ಧಿ ಪ್ರಾಧಿಕಾರ, ಮಹಾನಗರ ಪಾಲಿಕೆ, ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ಧ ದಾಖಲಾದ ಪ್ರಕರಣಗಳು.

- ಬ್ಯಾಂಕುಗಳಿಗೆ ಸಂಬಂಧಿಸಿದ ಪ್ರಕರಣಗಳು.
- ವೈವಾಹಿಕ ಅಥವಾ ಜೀವನಾಂಶ ಪ್ರಕರಣಗಳು: ಕಾನೂನಿನ್ವಯ ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು.
- ರಾಜಿ ಆಗಬಹುದಾದ ಎಲ್ಲಾ ವಿಧದ ಪ್ರಕರಣಗಳನ್ನು ಜನತಾ ನ್ಯಾಯಾಲಯಗಳ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು.

**ಜನತಾ ನ್ಯಾಯಾಲಯಗಳ ವೈಶಿಷ್ಟ್ಯ:**

- ವ್ಯಾಜ್ಯವನ್ನು ಜನತಾ ನ್ಯಾಯಾಲಯದ (ಲೋಕ್ ಅದಾಲತ್ ನ)ಮೂಲಕ ಶೀಘ್ರವಾಗಿ ಇತ್ಯರ್ಥಗೊಳಿಸಿಕೊಳ್ಳಬಹುದು.
- ಇಲ್ಲಿ ಯಾವುದೇ ಕೋರ್ಟ್ ಫೀ (ನ್ಯಾಯಾಲಯ ಶುಲ್ಕ ) ಪಾವತಿಸುವಂತಿರುವುದಿಲ್ಲ.
- ಜನತಾ ನ್ಯಾಯಾಲಯದಲ್ಲಿ ನೀವು ವಕೀಲರ ಮುಖಾಂತರವೇ ಭಾಗವಹಿಸಬೇಕೆನ್ನುವ ನಿಯಮವೇನೂ ಇಲ್ಲ. ನೀವೇ ನೇರವಾಗಿ ಭಾಗವಹಿಸಬಹುದು.
- ನಿಮ್ಮ ಪ್ರಕರಣದಲ್ಲಿ ನಿಮಗೆ ಮಾರ್ಗದರ್ಶನ ನೀಡಿ ರಾಜೀ ಸಂಧಾನ ಏರ್ಪಡಿಸಲು ಜನತಾ ನ್ಯಾಯಾಲಯದಲ್ಲಿ ಕನಿಷ್ಠ ಇಬ್ಬರು ಸಂಧಾನಕಾರರಿದ್ದು ಅವರಲ್ಲಿ ಒಬ್ಬರು ನ್ಯಾಯಾಧೀಶರೇ ಆಗಿರುತ್ತಾರೆ.
- ಸಂಧಾನಕಾರರು ಸೂಚಿಸುವ ಪರಿಹಾರ ನಿಮಗೆ ತೃಪ್ತಿಯಾದಲ್ಲಿ ಮಾತ್ರ ನೀವು ರಾಜಿ ಮಾಡಿಕೊಳ್ಳಬಹುದು.

**ಮಧ್ಯಸ್ಥಿಕೆ ಕೇಂದ್ರ:**

- ಮಧ್ಯಸ್ಥಿಕೆಯು ವಿವಾದ ಹೊಂದಿರುವ ಪಕ್ಷಕಾರರು ವಿಚಾರಣೆ ಹೋಗದೆ ತಮ್ಮ ವಿವಾದವನ್ನು ಸೃಜನಾತ್ಮಕವಾಗಿ ಇತ್ಯರ್ಥಪಡಿಸಿಕೊಳ್ಳಲು ಸಹಾಯ ಮಾಡುವ ಒಂದು ಪ್ರಕ್ರಿಯೆಯಾಗಿದೆ. ವಿವಾದ ಇತ್ಯರ್ಥಕ್ಕೆ ಮಧ್ಯಸ್ಥಕೆಯ ಎಲ್ಲಾ ಪಕ್ಷಕಾರರು ಹಾಗೂ ಅವರ ವಕೀಲರು ಸಕ್ರೀಯವಾಗಿ ಪಾಲ್ಗೊಳ್ಳುವಂತಹ ಒಂದು ವಿಶಿಷ್ಟ ಅವಕಾಶವನ್ನು ಇದು ಕಲಿಪಸುತ್ತದೆ. ಮಧ್ಯಸ್ಥಗಾರರು

ವಿವಾಕವೆತ್ತಿರುವ ಪಕ್ಷಕಾರರನ್ನು ವಿವಾದಕ್ಕೊಳಗಾಗಿರುವ ವಿಷಯವನ್ನು ಅರ್ಥ ಮಾಡಿಕೊಂಡು ಇತ್ಯರ್ಥಕ್ಕೆ ಬರಲು ಇರುವ ಅಡ್ಡಿ ಆತಂಕಗಳನ್ನು ನಿವಾರಿಸಲು ಪ್ರಯತ್ನ ಮಾಡುತ್ತಾನೆ.

- ಮಧ್ಯಸ್ಥಿಕೆಯು ಸ್ವಪ್ರೇರಿತವಾದದ್ದಾಗಿರುತ್ತದೆ. ಮಧ್ಯಸ್ಥಿಕೆಯು ಯಾವಾಗಲೂ ಪಾರದರ್ಶಕವಾಗಿರುತ್ತದೆ ಮಧ್ಯಸ್ಥಿಕೆಯಲ್ಲಿ ಹಣ ಮತ್ತು ಸಮಯ ವ್ಯರ್ಥವಾಗುವುದಿಲ್ಲ. ಮಧ್ಯಸ್ಥಿಕೆಯಲ್ಲಿ ನಿಯಮ ಹಾಗೂ ಸಾಕ್ಷ್ಯಕ್ಕೆ ಬದಲಾಗಿ ಪಕ್ಷಕಾರರ ಹಿತಾಸಕ್ತಿಗಳ ಬಗೆಗೆ ಗಮನ ಹರಿಸಲಾಗುವುದು. ಮಧ್ಯಸ್ಥಿಕೆಯು ಪಕ್ಷಕಾರರು ತಾವೇ ವಿವಾದವನ್ನು ಇತ್ಯರ್ಥಗೊಳಿಸಿಕೊಳ್ಳಲು ಶಕ್ತರಾಗುವಂತೆ ಮಾಡುತ್ತದೆ. ಪ್ರಕರಣದ ಇತ್ಯರ್ಥ ಸಾಧ್ಯವಾಗದಿದ್ದಲ್ಲಿ ನ್ಯಾಯಾ ನಿರ್ಣಯಕ್ಕಾಗಿ ಅದನ್ನು ಮಧ್ಯಸ್ಥಕೆಗಾಗಿ ಕಳುಹಿಸಿದ ನ್ಯಾಯಾಲಯಕ್ಕೆ ವಾಪಸ್ಸು ಕಳುಹಿಸಲಾಗುವುದು. ಪ್ರತಿ ಜಿಲ್ಲೆಯಲ್ಲಿ ಹಾಗೂ ತಾಲ್ಲೂಕು ಮಧ್ಯಸ್ಥಿಕೆ ಕೇಂದ್ರವನ್ನು ಸ್ಥಾಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯಾಲಯವನ್ನು ಸಂಪರ್ಕಿಸಬಹುದು.

**ರಾಜೀ ಸಂಧಾನ/ ವ್ಯಾಜ್ಯ ಪೂರ್ವ ಪ್ರಕರಣಃ**

ಸಾರ್ವಜನಿಕರು ದಿನ ನಿತ್ಯದ ಕಾನೂನು ಹಾಗೂ ಇತರೆ ಸಮಸ್ಯೆಗಳ ಬಗ್ಗ ಸಂಬಂಧಪಟ್ಟ ಕಾರ್ಯಾಲಯಗಳಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ಸಮಸ್ಯೆಗಳನ್ನು ಪರಿಹರಿಸುವ ವ್ಯವಸ್ಥೆ ಮಾಡಲಾಗುವುದು.

**ಸ್ವಪ್ರೇರಿತ ಕಾನೂನು ಸಹಾಯಕರು (Para Legal Volunteers-PLV):**

ಕಾನೂನು ಸಹಾಯಕರಾಗಿ ತರಬೇತಿ ಪಡೆದವರು ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಅರ್ಹ ನಾಗರೀಕರ ನಡುವೆ ಪರಿಣಾಮಕಾರ ಸಮನ್ವಯಕಾರರಾಗಿ ಕಾರ್ಯನಿರ್ವಹಿಸುತ್ತಾರೆ.

ಸ್ವಪ್ರೇರಿತ ಕಾನೂನು ಸಹಾಯಕರು ತಮ್ಮ ಸುತ್ತಮುತ್ತಲಿನ ಪ್ರದೇಶದ ಶೋಷಿತ ಹಾಗೂ ದೌರ್ಜನ್ಯಕ್ಕೊಳಗಾಗ ಜನರ ಸೇವೆ ಮಾಡಲು ಅರ್ಪಣಾ ಮನೋಭಾವ ಹೊಂದಿರುತ್ತಾರೆ. ಇವರು ಸರ್ಕಾರದ ವಿವಿಧ ಯೋಜನೆಗಳು, ಆದೇಶಗಳು, ಶಾಸನಗಳು, ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ, ಜನತಾ ನ್ಯಾಯಾಲಯಗಳು, ಪರ್ಯಾಯ ವಿವಾದ

ಪರಿಹಾರ ವ್ಯವಸ್ಥೆ, ಉಚಿತ ಕಾನೂನು ಸಹಾಯ ಮತ್ತು ಸೇವೆಗಳ ಬಗೆಗೆ ಅರಿವನ್ನುಂಟು ಮಾಡುವ ಸೇವೆಯನ್ನು ಸಲ್ಲಿಸುವುದಲ್ಲದೇ ನಾಗರೀಕರ ಹಕ್ಕುಗಳು ಹಾಗೂ ಹೊಣೆಗಳ ಬಗೆಗೆ ಶಿಕ್ಷಣ ನೀಡುವುದು, ಸಮಸ್ಯೆಗಳಿಗೆ ಪರಿಹಾರ/ ಸಲಹೆ ಕೋರಿ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸುವ ಬಗೆಗೆ ಜನರಲ್ಲಿ ಅರಿವು ಮೂಡಿಸುವುದು, ಕಾನೂನು ಅರಿವು ಶಿಬಿರಗಳನ್ನು ಬೇರೆಯವರ ಸಹಯೋಗದೊಂದಿಗೆ ವ್ಯವಸ್ಥೆಗೊಳಿಸುವುದು. ಕಾನೂನು ಸೇವೆಗಳ ಪ್ರಾಧಿಕಾರ/ಕಾನೂನು ಸೇವೆಗಳ ಸಮಿತಿಗಳು ಒದಗಿಸುವ ಸೇವೆಗಳ ಬಗೆಗೆ ಅರಿವನ್ನುಂಟುಮಾಡುವುದು, ಮಧ್ಯಸ್ಥಿಕೆ, ರಾಜಿ ಸಂಧಾನ ಮತ್ತು ಜನತಾ ನ್ಯಾಯಾಲಯಗಳ ಮೂಲಕ ವಿವಾದಗಳನ್ನು ಪರಿಹರಿಸಿಕೊಳ್ಳುವುದರಲ್ಲಿ ಇರುವ ಪ್ರಯೋಜನದ ಬಗೆಗೆ ನಾಗರೀಕರಿಗೆ ತಿಳುವಳಿಕೆ ನೀಡುವುದು. ಖಾಯಂ ಜನತಾ ನ್ಯಾಯಾಲಯಗಳಲ್ಲಿ ಸಾರ್ವಜನಿಕ ಉಪಮಯುಕ್ತ ಸೇವೆಗಳಿಗೆ ಸಂಬಂಧಿಸಿದಂತೆ ಮಾಹಿತಿ ನೀಡುವುದು, ಇವೇ ಮುಂತಾದ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವ ಸ್ವಪ್ರೇರಿತ ಕಾನೂನು ಸಹಾಯಕರು ಸಮಾಜದಲ್ಲಿ ಎಲ್ಲರಿಗೂ ನ್ಯಾಯಾಕ್ಕೆ ಪ್ರವೇಶಾವಕಾಶ ಸಿಗುವಲ್ಲಿ ಅರ್ಪಣಾ ಮನೋಭವದಿಂದ ಸದಾ ಶ್ರಮಿಸುತ್ತಿರುತ್ತಾರೆ.

**ಕಾನೂನು ಅರಿವುಃ**

ಜನರಲ್ಲಿ ಕಾನೂನು ಅರಿವು ಮೂಡಿಸುವ ನಿಟ್ಟಿನಲ್ಲಿ ರಾಜ್ಯ ಪ್ರಾಧಿಕಾರದಿಂದ ಪ್ರಕಟಿಸಲಾದ ಅನೇಕ ಪುಸ್ತಕಗಳು, ಕಿರು ಹೊತ್ತಿಗೆಗಳು ಹಾಗೂ ಕರಪತ್ರಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ಇಲ್ಲವೆ ಅತ್ಯಂತ ಕಡಿಮೆ ಬೆಲೆಗೆ ವಿತರಿಸುವುದು. ಎಲ್ಲಾ ವರ್ಗದ ಜನರಿಗೆ ಕಾನೂನು ಕಾರ್ಯಾಗಾರ, ಸರ್ಕಾರೇತರ ಸಂಸ್ಥೆಗಳು, ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಇತರೆ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಕಾನೂನು ಅರಿವು-ನೆರವು ಕಾರ್ಯಕ್ರಮಗಳನ್ನು ಏರ್ಪಡಿಸುವುದರ ಜೊತೆಗೆ ಪ್ರಾಧಿಕಾರದಿಂದ ಕಾನೂನು ಗೀತೆಗಳು, ಧ್ವನಿ ಸುರಳಿಗಳು, ನಾಟಕಗಳು ಹಾಗೂ ಟೆಲಿ ನಾಟಕಗಳ ಮೂಲಕ ಜನರಲ್ಲಿ ಕಾನೂನಿನ ಬಗೆಗೆ ಅರಿವನ್ನುಂಟು ಮಾಡಲು ನಿರಂತರವಾಗಿ ಶ್ರಮಿಸಲಾಗುತ್ತಿದೆ.

**ಸಂಚಾರಿ ಕಾನೂನು ಸಾಕ್ಷರತಾ ರಥ:**

ನಮ್ಮ ನಾಡಿನಲ್ಲಿ ಹಲವು ಜನರಿಗೆ ಕಾನೂನಿನ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕೆಂಬ ತವಕವಿದ್ದರೂ ಸಹ ತಮ್ಮ ಜೀವನಾಧಾರವಾದ ಹಣಗಳಿಸುವುದಕ್ಕಾಗಿ ಬಿಡುವಿಲ್ಲದೆ ದುಡಿಯಬೇಕಿದ್ದು, ಕಾನೂನು ಬಗ್ಗೆ ಮಾಹಿತಿ ಪಡೆಯಲು ಅದಕ್ಕಾಗಿ ಇರುವ ಕೇಂದ್ರಗಳಿಗೆ ಭೇಟಿ ನೀಡಲು ಅಶಕ್ತರಾಗಿರುತ್ತಾರೆ. ಇಂತಹ ಜನರನ್ನು ಗಮನದಲ್ಲಿರಿಕಸಿಕೊಂಡು ರಾಜ್ಯ ಪ್ರಾಧಿಕಾರದ ಕಾನೂನು ಸಾಕ್ಷರತಾ ರಥಗಳ ಮೂಲಕ ಅವರುಗಳಿಗೆ ಕಾನೂನಿನ ಬಗ್ಗೆ ಮಾಹಿತಿ ನೀಡಲು ಕ್ರಮಕೈಗೊಳ್ಳಲಾಗುವುದು. ತಾಲ್ಲೂಕು ಸಮಿತಿಗಳ ಮೂಲಕ ಹಳ್ಳಿ ಹಳ್ಳಿಗೆ ಸಂಚರಿಸುವ ಮೂಲಕ ಸ್ಥಳೀಯ ನ್ಯಾಯಾಧೀಶರು, ವಕೀಲರು ಹಾಗೂ ಇತರರು ಕಾನೂನು ಪ್ರಸಾರದ ಮೂಲಕ ಕಾಲಕಾಲಕ್ಕೆ ಸಾಕ್ಷರತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜನಸಾಮಾನ್ಯರನ್ನು ಕಾನೂನು ಸಾಕ್ಷರರನ್ನಾಗಿ ಮಾಡುವಲ್ಲಿ ಯಶಸ್ಸನ್ನು ಸಾಧಿಸಲಾಗುತ್ತಿದೆ.

**ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸ:**

ತಾಲ್ಲೂಕು ಕಾನೂನು ಸೇವಾ ಸಮಿತಿ ಮಳವಳ್ಳಿ.

**ಮಾನ್ಯ ಅಧ್ಯಕ್ಷರ ಆದೇಶದನುಸಾರ**

**ಸದಸ್ಯ ಕಾರ್ಯದರ್ಶಿಗಳು**

**ತಾಲ್ಲೂಕು ಕಾನೂನು ಸೇವೆಗಳ ಸಮಿತಿ,**

**ಮಳವಳ್ಳಿ.**